ಆ) ಹೊಸದಾಗಿ ಕಲ್ಲು ಗಣಿ ಗುತ್ತಿಗೆ ಮಂಜೂರಾತಿ ಕೋರಿ ಅರ್ಜಿಗಳು ಬರುತ್ತಿದ್ದು, ಮಂಜೂರಾತಿಗಾಗಿ ನಿಯಮಾನುಸಾರ ಕ್ರಮ ಜರುಗಿಸಲಾಗುವುದು

ಇ) ಸರ್ಕಾರದ ಸುತ್ತೋಲೆ ಸಂಖ್ಯೆ RD 83 LGP 2006, ದಿನಾಂಕ 05-01-2007 ರ ಪ್ರಕಾರ ರಾಜ್ಯದಲ್ಲಿನ ಯಾವುದೇ, ಗೋಮಾಳ, ಗಾಯರಾಣ, ಹುಲ್ಲುಬನ್ನಿ, ಜಮೀನುಗಳಲ್ಲಿ ಯಾವುದೇ ವ್ಯಕ್ತಿ ಅಥವಾ ಸಂಸ್ಥೆಗೆ ಗಣಿ ಗುತ್ತಿಗೆಗೆ ಮಂಜೂರು ಮಾಡಲು ನಿರ್ಬಂಧವಿಧಿಸಲಾಗಿದೆ ಆದ್ದರಿಂದ ಮೇಲಿನ ವರ್ಗೀಕರಣದ ಜಮೀನುಗಳಲ್ಲಿನ ಅರ್ಜಿಗಳನ್ನು ಹೊರತುಪಡಿಸಿ, ಉಳಿದ ಪ್ರದೇಶಗಳಲ್ಲಿ ಕಲ್ಲು ಗಣಿ ಗುತ್ತಿಗೆ ಮಂಜೂರಾತಿಗಾಗಿ ಸ್ವೀಕರಿಸಲಾದ ಅರ್ಜಿಗಳನ್ನು ಸಂಬಂಧಪಟ್ಟ ಇಲಾಖೆಗಳ ಅಭಿಪ್ರಾಯ/ ನಿರಾಕ್ಷೇಪಣ ಪತ್ರ ಪಡೆದ ನಂತರ ಕರ್ನಾಟಕ ಉಪ ಖನಿಜ ರಿಯಾಯತಿ ನಿಯಮಾವಳಿ, 1994 ರ ನಿಯಮಗಳಡಿಯಲ್ಲಿ ಕಲ್ಲು ಗಣಿಗುತ್ತಿಗೆಗಳನ್ನು ಮಂಜೂರು ಮಾಡಲಾಗುತ್ತಿದೆ

1545 (1943) ಡಾ॥ ಸುಧಾಕರ್ ಎಂ ಸಿ (ಚಿಂತಾಮಣಿ) – ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಂತಾಮಣಿ ನಗರದ ಮೂಲಕ ಹಾದು ಹೋಗುತ್ತಿರುವ ಮುಳಬಾಗಲ್-ಮೂಡಿಗೆರೆ ರಾಜ್ಯ ಹೆದ್ದಾರಿಯಲ್ಲಿ ಇತ್ತೀಚೆಗೆ ಅಪಘಾತಗಳು ಹೆಚ್ಚಿಗೆ ಸಂಭವಿಸುತ್ತಿರುವುದು ನಿಜವಲ್ಲವೇ,

ಆ) ಈ ರಸ್ತೆಯ ಅಭಿವೃದ್ಧಿ ಕಾಮಗಾರಿಗಳಿಗೆ ಈಗಾಗಲೇ ಮಂಜೂರಾತಿಯಾಗಿದ್ದರೂ ಕೂಡ ಕಾಮಗಾರಿಗಳನ್ನು ಇದುವರೆವಿಗೂ ಕೈಗೆತ್ತಿಕೊಳ್ಳದಿರಲು ಕಾರಣವೇನು,

ಇ) ಈ ಕಾಮಗಾರಿಯನ್ನು ಯಾವಾಗ ಪೂರ್ಣಗೊಳಿಸಲಾಗುವುದು?

ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ಹೌದು

ಆ) ಮೂಡಿಗೆರೆ-ಮುಳಬಾಗಿಲ ರಾಜ್ಯ ಹೆದ್ದಾರಿ-58 ರ ನಿರ್ವಹಣೆಯನ್ನು ಕರ್ನಾಟಕ

ರಸ್ತೆ ಅಭಿವೃದ್ಧಿ ನಿಗಮ ನಿಯಮಿತದ ಮೂರು ವರ್ಷದ ರಾಜ್ಯ ಹೆದ್ದಾರಿಯ ನಿರ್ವಹಣೆಯ ಯೋಜನೆಯ ಅಡಿಯಲ್ಲಿ ನಿರ್ವಹಣೆಗಾಗಿ ತೆಗೆದುಕೊಳ್ಳಲಾಗಿದೆ ಚಿಂತಾಮಣಿ ತಾಲ್ಲೂಕಿನಲ್ಲಿ ತೆಗೆದುಕೊಂಡ ರಾಜ್ಯ ಹೆದ್ದಾರಿ ನಿರ್ವಹಣೆಯ ಉದ್ದವು 22 20 ಕಿ ಮೀ ಇರುತ್ತದೆ ಚಿಂತಾಮಣಿ ಪಟ್ಟಣ ವ್ಯಾಪ್ತಿಯಲ್ಲಿನ 1 40 ಕಿ ಮೀ ರಸ್ತೆಯ ನಿರ್ವಹಣೆ ತೆಗೆದುಕೊಳ್ಳಲಾಗಿದ್ದು, ಕಾಮಗಾರಿಗಳು ಪ್ರಗತಿಯಲ್ಲಿದೆ ಅಲ್ಲದೆ, ಸದರಿ ರಾಜ್ಯ ಹೆದ್ದಾರಿಯ ಮೂಡಿಗೆರೆ–ವೆಂಕಟಗಿರಿಕೋಟೆ (ರಾಜ್ಯ ಹೆದ್ದಾರಿ–58) ವಾಯಾ ಶಿರಾ–ಚಿತ್ತೂರು ರಸ್ತೆಯ ಕಿ ಮೀ 294 00 ಯಿಂದ 341 00 ರವರೆಗೆ ಕೇಂದ್ರ ಭೂಸಾರಿಗೆ ಮಂತ್ರಾಲಯದ ಆರ್ಥಿಕ ಪ್ರಾಮುಖ್ಯತೆ ಯೋಜನೆ ಅಡಿಯಲ್ಲಿ ಮಂಜೂರಾಗಿದ್ದು, ಕಾಮಗಾರಿಗಳು ಈಗಾಗಲೇ ಪ್ರಗತಿಯಲ್ಲಿರುತ್ತವೆ

ಇ) ರಾಜ್ಯ ಹೆದ್ದಾರಿ ನಿರ್ವಹಣೆಯ ಯೋಜನೆ ಅಡಿಯಲ್ಲಿ ತೆಗೆದುಕೊಂಡ ಕಾಮಗಾರಿಗಳನ್ನು ಒಂದು ತಿಂಗಳೊಳಗಾಗಿ ಪೂರ್ಣಗೊಳಿಸಲಾಗುವುದು ಹಾಗೂ ಕೇಂದ್ರ ಭೂಸಾರಿಗೆ ಮಂತ್ರಾಲಯದ ಅಡಿಯಲ್ಲಿ ತೆಗೆದುಕೊಳ್ಳುವ ಕಾಮಗಾರಿಯ ಗುತ್ತಿಗೆ ಕರಾರಿನಂತೆ 5–10–2007 ರಲ್ಲಿ ಪೂರ್ಣಗೊಳಿಸಲಾಗುವುದು

1546 (2083) ಶ್ರೀ ಸುನೀಲ್ ಕುಮಾರ್ (ಕಾರ್ಕಳ) – ವಾಣಿಜ್ಯ ಮತ್ತು ಕೈಗಾರಿಕೋದ್ಯಮ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತ್ಯಾಜ್ಯ (ಕಸ) ವಸ್ತುಗಳಿಂದ ವಿದ್ಯುತ್ ಉತ್ಪಾದಿಸುವ ಯೋಜನೆಗಳನ್ನು ಸರ್ಕಾರ ಕೈಗೆತ್ತಿಕೊಂಡಿದೆಯೇ,

ಆ) ಈ ಯೋಜನೆಯನ್ನು ಯಾವ ಯಾವ ನಗರಪಾಲಿಕೆ ಜೊತೆ ಒಪ್ಪಂದ ಮಾಡಿಕೊಳ್ಳಲಾಗಿದೆ ಹಾಗು ಈ ಯೋಜನೆಯ ಉಸ್ತುವಾರಿಯನ್ನು ವಹಿಸಿಕೊಂಡಿರುವ ಕಂಪನಿ ಯಾವುದು,

ಇ) ಯೋಜನೆಯ ಅಂದಾಜು ವೆಚ್ಚವೆಷ್ಟು, ಕಂಪನಿಗೆ ನೀಡಿರುವ ಗುತ್ತಿಗೆ ಅವಧಿ ಎಷ್ಟು ಹಾಗೂ ಪಾಲಿಕೆಯು ಪ್ರತಿದಿನ ನೀಡಲಿರುವ ಕಸದ (ತ್ಯಾಜ್ಯದ) ಪ್ರಮಾಣ ಎಷ್ಟು? (ವಿವರ ನೀಡುವುದು),